**All India Radio: Bangalore**
**National Bulletin In Kannada**
**27.06.2026  1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**27.06.2026  1.10 p.m.**

**<><><><>**

ಮುಖ್ಯಾಂಶಗಳು

1. ಮೂರು ದಿನಗಳ ಭೇಟಿಗಾಗಿ ಸೆಶಲ್ಸ್‌ಗೆ ಪ್ರಯಾಣ ಬೆಳೆಸಿದ ಪ್ರಧಾನಿ ನರೇಂದ್ರ ಮೋದಿ
2. ಬೆಂಗಳೂರಿನಲ್ಲಿಂದು ನಾಡಪ್ರಭು ಕೆಂಪೇಗೌಡರ ಜಯಂತ್ಯೋತ್ಸವದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭಾಗಿ
3. ೧೩೫ನೇ 'ಮನ್ ಕಿ ಬಾತ್' ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಭಾರತೀಯರನ್ನುದ್ದೇಶಿಸಿ ಭಾಷಣ
4. ಯುಎಸ್ ಓಪನ್ ಬ್ಯಾಡ್ಮಿಂಟನ್: ಭಾರತದ ಕಿಡಂಬಿ ಶ್ರೀಕಾಂತ್, ರೌನಕ್ ಚೌಹಾಣ್ ಮತ್ತು ದೇವಿಕಾ ಸಿಹಾಗ್ ಸೆಮಿಫೈನಲ್ ಪ್ರವೇಶ
5. ಫಿಫಾ ವಿಶ್ವಕಪ್ ಫುಟ್ಬಾಲ್: ಇದೇ ಮೊದಲ ಬಾರಿಗೆ ನಾಕೌಟ್ ಹಂತ ಪ್ರವೇಶಿಸಿದ ಈಜಿಪ್ಟ್

<><><><>

ಇಂದಿನಿಂದ ೨೯ರವರೆಗಿನ ಸೆಶೆಲ್ಸ್ ರಾಷ್ಟ್ರದ ಪ್ರವಾಸಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಬೆಳಗ್ಗೆ ಪ್ರಯಾಣ ಬೆಳೆಸಿದರು. ಭಾರತದ ಮಹಾಸಾಗರ ಪರಿಕಲ್ಪನೆ ಮತ್ತು ಜಾಗತಿಕ ದಕ್ಷಿಣ ಒಕ್ಕೂಟದ ಬದ್ಧತೆಯಲ್ಲಿ ಸೆಶಲ್ಸ್ ದೇಶ ಅತ್ಯಂತ ಮೌಲ್ಯಯುತ ಕಡಲ ನೆರೆಹೊರೆಯ ಪಾಲುದಾರ ರಾಷ್ಟ್ರ ಎಂದು ಪ್ರಧಾನಿ ತಿಳಿಸಿದ್ದಾರೆ. ಸೆಶೆಲ್ಸ್ ರಾಷ್ಟ್ರಕ್ಕೆ ಪ್ರಯಾಣ ಬೆಳೆಸುವುದಕ್ಕೂ ಮುನ್ನ ನಿರ್ಗಮನ ಹೇಳಿಕೆ ನೀಡಿದ ಅವರು, ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಬಾಂಧವ್ಯಕ್ಕೆ ಈ ವರ್ಷ ೫೦ ವರ್ಷಗಳು ತುಂಬುತ್ತಿದ್ದು, ಈ ಮೌಲ್ಯಯುತ ಸಂಬಂಧವು ಪರಸ್ಪರ ನಂಬಿಕೆ ಮತ್ತು ಹಂಚಿಕೆಯ ಪ್ರಜಾಸತ್ತಾತ್ಮಕ ತತ್ವಗಳ ಮೇಲೆ ಆಧಾರಿತವಾಗಿದೆ ಎಂದು ತಿಳಿಸಿದ್ದಾರೆ. ಪ್ರವಾಸದ ಭಾಗವಾಗಿ ಪ್ರಧಾನಿ, ಸೆಶೆಲ್ಸ್ ರಾಷ್ಟ್ರೀಯ ದಿನದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಭಾರತೀಯ ರಕ್ಷಣಾ ಪಡೆಗಳ ಒಂದು ತಂಡ ಮತ್ತು ಭಾರತೀಯ ನೌಕಾಪಡೆಯ ಎರಡು ಹಡಗುಗಳು ಈ ಆಚರಣೆಗಳಲ್ಲಿ ಭಾಗವಹಿಸಲಿವೆ ಎಂದು

ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಂದರ್ಭದಲ್ಲಿ, ಪ್ರಧಾನಮಂತ್ರಿ, ಸೆಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ಮಾತುಕತೆ ನಡೆಸಲಿದ್ದು, ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳನ್ನು ಪರಿಶೀಲಿಸುವ ಜೊತೆಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಪ್ರಧಾನಮಂತ್ರಿ ಅವರು ಸೆಶೆಲ್ಸ್ ರಾಷ್ಟ್ರೀಯ ಸಂಸತ್ ಅನ್ನು ಉದ್ದೇಶಿಸಿ ಭಾಷಣ ಮಾಡಲಿದ್ದು, ಭಾರತೀಯ ಮೂಲದ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ನಡುವೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಖಾಯಂ ಸದಸ್ಯತ್ವ ಪಡೆಯುವ ಭಾರತದ ಪ್ರಯತ್ನಕ್ಕೆ ಸೆಶೆಲ್ಸ್ ದೇಶವು ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಸೆಶೆಲ್ಸ್ ಭೇಟಿಗೂ ಮುನ್ನ ಮಾತನಾಡಿರುವ ಆ ದೇಶದ ವಿದೇಶಾಂಗ ಸಚಿವ ಬ್ಯಾರಿಫಾರೆ, ಇಂದಿನ ಜಾಗತಿಕ ವಾಸ್ತವಗಳನ್ನು ಪ್ರತಿಬಿಂಬಿಸಲು ಪ್ರಸ್ತುತ ಇರುವ ಅಂತಾರಾಷ್ಟ್ರೀಯ ಸಂಸ್ಥೆಗಳು ಮತ್ತು ಜಾಗತಿಕ ವ್ಯವಸ್ಥೆಯಲ್ಲಿ ಸುಧಾರಣೆಗಳಾಗುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಈ ಪ್ರವಾಸದ ಅಂಗವಾಗಿ ಉಪರಾಷ್ಟ್ರಪತಿಯವರು ಇಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ನಾಡಪ್ರಭು ಕೆಂಪೇಗೌಡರ ೫೧೭ನೇ ಜಯಂತ್ಯುತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ, ಬೆಂಗಳೂರಿನಲ್ಲಿ ನಡೆಯಲಿರುವ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಭಾಗವಹಿಸಲಿದ್ದಾರೆ. ಈ ಸಮಾವೇಶವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ.

<><><>

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ದೇಶದ ಮೊದಲ ಸಹಕರ ಆಧಾರಿತ ಟ್ಯಾಕ್ಸಿ ಸೇವೆ - 'ಭಾರತ್ ಟ್ಯಾಕ್ಸಿ'ಗೆ ಗುಜರಾತ್‌ನಲ್ಲಿ ಚಾಲನೆ ನೀಡಿದರು. 'ಭಾರತ್ ಟ್ಯಾಕ್ಸಿ' ಸಹಕಾರ ತತ್ವಗಳಡಿಯಲ್ಲಿ ಕಾರ್ಯ ನಿರ್ವಹಿಸುವ ಒಂದು ವಿನೂತನ ಡಿಜಿಟಲ್ ಸಾರಿಗೆ

ವೇದಿಕೆಯಾಗಿದ್ದು, ಇದು ಸಾರಥಿಯೇ ಮಾಲಿಕ ಎಂಬ ಪರಿಕಲ್ಪನೆಗೆ ನೈಜರೂಪ ನೀಡಿದೆ. ಈ ಮಾದರಿಯಡಿ ಟ್ಯಾಕ್ಸಿ ಚಾಲಕರು ಕೇವಲ ಸೇವೆ ಒದಗಿಸುವ ಸಿಬ್ಬಂದಿಯಾಗಿ ಉಳಿಯದೆ, ಈ ಸಂಸ್ಥೆಯ ಪಾಲುದಾರರು ಹಾಗೂ ಮಾಲೀಕರು ಆಗಿರುತ್ತಾರೆ. ಇದು ಚಾಲಕರಿಗೆ ಆರ್ಥಿಕ ಸಬಲೀಕರಣ, ಸಾಮಾಜಿಕ ಭದ್ರತೆ ಮತ್ತು ಮಾಲಿಕತ್ವದ ಹಕ್ಕುಗಳನ್ನು ಒದಗಿಸುವ ಮೂಲಕ ಅವರ ಜೀವನಮಟ್ಟವನ್ನು ಸುಧಾರಿಸಲು ನೆರವಾಗಲಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತವು ಗಣನೀಯ ಆರ್ಥಿಕ ಪ್ರಗತಿ ಸಾಧಿಸುತ್ತಿದ್ದು, ಜಾಗತಿಕವಾಗಿ ಪ್ರಭಾವಶಾಲಿ ಶಕ್ತಿಯಾಗಿ ಹೊರಹೊಮ್ಮುತ್ತಿದೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಶ್ಲಾಘಿಸಿದ್ದಾರೆ. ಶ್ವೇತಭವನದಲ್ಲಿ ನೀಡಿದ ಸಂದರ್ಶನದಲ್ಲಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತವು ಭಾರತವನ್ನು ತನ್ನ ಅತ್ಯಂತ ನಿಕಟ ಕಾರ್ಯತಂತ್ರದ ಪಾಲುದಾರ ಎಂದು ಪರಿಗಣಿಸುತ್ತದೆ ಎಂದು ಅವರು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ನಿಕಟ ಒಡನಾಟವು ದ್ವಿಪಕ್ಷೀಯ ರಾಜತಾಂತ್ರಿಕತೆಗೆ ಪ್ರಮುಖವಾಗಿದ್ದು, ಸಮಾನ ಪ್ರಜಾಸತ್ತಾತ್ಮಕ ಮೌಲ್ಯಗಳು ಉಭಯ ದೇಶಗಳ ಬಲವಾದ ಸಹಕಾರಕ್ಕೆ ಭದ್ರ ಬುನಾದಿಯಾಗಿದೆ ಎಂದು ಅವರು ಹೇಳಿದ್ದಾರೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೭ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><><>

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಅವರ ಅಧ್ಯಕ್ಷತೆಯಲ್ಲಿ ಕೇಂದ್ರೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂಡಳಿಯ ೧೪ನೇ ಸಮ್ಮೇಳನವು ಇದೇ ೨೯ರಂದು ನವದೆಹಲಿಯಲ್ಲಿ ನಡೆಯಲಿದೆ. ಈ ಸಮ್ಮೇಳನದಲ್ಲಿ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಆರೋಗ್ಯ ಸಚಿವರು, ಸಂಸತ್ ಸದಸ್ಯರು ಮತ್ತು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಆರೋಗ್ಯ ವಲಯದ ಪ್ರಮುಖ ನೀತಿಗಳು, ಆದ್ಯತೆಗಳು ಹಾಗೂ ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಹಯೋಗವನ್ನು ಬಲಪಡಿಸುವ ಕುರಿತು ಸಮ್ಮೇಳನದಲ್ಲಿ ಸುದೀರ್ಘ ಚರ್ಚೆ ನಡೆಯಲಿದೆ. ಸಮಾವೇಶದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವರಾದ ಅನುಪ್ರಿಯಾ ಪಟೇಲ್ ಮತ್ತು ಪ್ರತಾಪರಾವ್ ಜಾಧವ್ ಪಾಲ್ಗೊಳ್ಳಲಿದ್ದಾರೆ.

<><><>

ಕಲ್ಪಾಕ್ಕಂನ ಇಂದಿರಾ ಗಾಂಧಿ ಪರಮಾಣು ಸಂಶೋಧನಾ ಕೇಂದ್ರದಲ್ಲಿ ಫಾಸ್ಟ್ ಬ್ರೀಡರ್ ಪರೀಕ್ಷಾ ರಿಯಾಕ್ಟರ್‌ನಿಂದ ಉತ್ಪತ್ತಿಯಾಗುವ ಪರಮಾಣು ಪ್ರಕ್ರಿಯೆಯ ಶಾಖವನ್ನು ಬಳಸಿಕೊಂಡು ತಾಮ್ರ-ಕ್ಲೋರಿನ್ ಥರ್ಮೋಕೆಮಿಕಲ್ ಸೈಕಲ್ ಆಧಾರಿತ ವಿಶ್ವದ ಮೊದಲ ಹೈಡ್ರೋಜನ್ ಉತ್ಪಾದನಾ ಸೌಲಭ್ಯವನ್ನು ಪರಮಾಣು ಇಂಧನ ಇಲಾಖೆಯ ಕಾರ್ಯದರ್ಶಿ ಅಜಿತ್ ಕುಮಾರ್ ಮೊಹಂತಿ ಉದ್ಘಾಟಿಸಿದರು.

<><><>

ಮಧ್ಯಪ್ರದೇಶದ ಜಿಐ ಮಾನ್ಯತೆ ಪಡೆದ ಪ್ರಸಿದ್ಧ ರೇವಾ ಸುಂದರ್ಜಾ ಮಾವಿನ ಹಣ್ಣುಗಳ ಮೊದಲನೇ ವಾಣಿಜ್ಯ ರಫ್ತು ಪ್ರಕ್ರಿಯೆಗೆ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ ಯಶಸ್ವಿಯಾಗಿ ಚಾಲನೆ ನೀಡಿದ್ದು, ಯುಎಇ ರಾಷ್ಟ್ರಕ್ಕೆ ಇವುಗಳನ್ನು ರಫ್ತು ಮಾಡಲಾಗಿದೆ. ಜಾಗತಿಕ ಮಾರುಕಟ್ಟೆಯಲ್ಲಿ ಭಾರತದ ವಿಶಿಷ್ಟ ಕೃಷಿ ಉತ್ಪನ್ನಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಇದು ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೃಷಿ ಸಚಿವಾಲಯ ತಿಳಿಸಿದೆ. ಮೊದಲನೇ ರಫ್ತಿನಲ್ಲಿ ಒಂದು ಮೆಟ್ರಿಕ್ ಟನ್‌ನಷ್ಟು ಉತ್ತಮ ಗುಣಮಟ್ಟದ ಜಿಐ ಮಾನ್ಯತೆ ಹೊಂದಿದ, ರೇವ ಸುಂದರ್ಜಾ ಮಾವಿನ ಹಣ್ಣುಗಳನ್ನು ಕಳುಹಿಸಿಕೊಡಲಾಗಿದೆ.

<><><>

ಕ್ಯಾಲಿಫೋರ್ನಿಯಾದ ಫುಲ್ಲರ್‌ಟನ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಕಿಡಂಬಿ ಶ್ರೀಕಾಂತ್, ರೌನಕ್ ಚೌಹಾನ್ ಮತ್ತು ದೇವಿಕಾ ಸಿಹಾಗ್ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಕಿಡಂಬಿ ಶ್ರೀಕಾಂತ್, ಚೇನಾ ತೈಪೆಯ ಲಿಯಾವೊ ಜುವೊ ಫು ವಿರುದ್ಧ ೨೧-೯, ೧೨-೨೧, ೨೧-೮ ಸೆಟ್‌ಗಳ ಅಂತರದಿಂದ ಗೆಲುವು ದಾಖಲಿಸಿದರು. ಇದೇ ವಿಭಾಗದ ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ರೌನಕ್ ಚೌಹಾನ್, ಇಸ್ರೇಲ್‌ನ ಮಿಶಾ ಜಿಲ್ಬರ್‌ಮಾನ್ ವಿರುದ್ಧ ನೇರ ಸೆಟ್‌ಗಳಿಂದ ಜಯ ತಮ್ಮದಾಗಿಸಿಕೊಂಡರು. ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ದೇವಿಕಾ ಸಿಹಾಗ್ ಜಪಾನ್‌ನ ರಿಕೋ ಗುಂಜಿ ವಿರುದ್ಧ ೨೨-೨೦, ೨೧-೧೯ ಸೆಟ್‌ಗಳ ಅಂತರದಲ್ಲಿ ಗೆದ್ದು, ಸೆಮಿಫೈನಲ್ ಪ್ರವೇಶಿಸಿದರು. ಇದೇ ವಿಭಾಗದಲ್ಲಿ ಭಾರತದ ರಕ್ಷಿತಾ ರಾಮರಾಜ್, ತಾನ್ವಿ ಶರ್ಮಾ ಕ್ವಾರ್ಟರ್ ಫೈನಲ್‌ನಲ್ಲಿ ಪರಾಭವಗೊಂಡರು.

<><><><>

ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ 'ಜಿ' ಗುಂಪಿನ ತಮ್ಮ ಕೊನೆಯ ಪಂದ್ಯದಲ್ಲಿ ಇರಾನ್ ವಿರುದ್ಧ ೧-೧ ಗೋಲುಗಳ ಡ್ರಾ ಸಾಧಿಸುವ ಮೂಲಕ ಈಜಿಪ್ಟ್ ತಂಡ ಇದೇ ಮೊದಲ ಬಾರಿಗೆ ವಿಶ್ವಕಪ್ ನಾಕೌಟ್ ಹಂತಕ್ಕೆ ಪ್ರವೇಶಿಸಿ, ಇತಿಹಾಸ ನಿರ್ಮಿಸಿದೆ. ೩೨ರ ಸುತ್ತಿನ ಪಂದ್ಯದಲ್ಲಿ ಈಜಿಪ್ಟ್ ತಂಡ, ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. 'ಜಿ' ಗುಂಪಿನ ಮತ್ತೊಂದು ಪಂದ್ಯದಲ್ಲಿ ಬೆಲ್ಜಿಯಂ ತಂಡ, ನ್ಯೂಜಿಲೆಂಡ್ ವಿರುದ್ಧ ೫-೧ ಗೋಲುಗಳ ಜಯ ಸಾಧಿಸಿ, ತನ್ನ ಗುಂಪಿನಲ್ಲಿ ಅಗ್ರಸ್ಥಾನದೊಂದಿಗೆ ನಾಕೌಟ್ ಹಂತದಲ್ಲಿ ಸ್ಥಾನ ಖಚಿತಪಡಿಸಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>